## 6 ನೇ ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು 7 ನೇ ಜೆ.ಎಂ.ಎಫ್.ಸಿ. ತುಮಕೂರು
## ಸಿ.ಸಿ.ನಂಃ 17164/2025

ಫ್ರಾಸಾಃ 1

ಚಾಸಾಃ 1

**ದಿನಾಂಕ 30.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು**

| | | |
|---|---|---|
| ಸಾಕ್ಷಿದಾರರ ಹೆಸರು | ಃ | ಪೊನ್ನಸ್ವಾಮಿ |
| ತಂದೆಯ ಹೆಸರು | ಃ | ರಾಸಪ್ಪನ್ |
| ವಯಸ್ಸು | ಃ | 46 ವರ್ಷ |
| ಉದ್ಯೋಗ | ಃ | ಚಾಲಕ |
| ವಾಸ | ಃ | ತೆಮಿಳುನಾಡು |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

1. ಸಾಕ್ಷಿಗೆ ದೂರು, ಮಹಜರ್, ಕಚ್ಚಾ ನಕಾಶೆ, ಇಂಡೆಮ್‌ನಿಟಿ ಬಾಂಡನ್ನು ತೋರಿಸಲಾಯಿತು ಸಾಕ್ಷಿ ಅದರಲ್ಲಿನ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 1 ರಿಂದ 4, ಸಾಕ್ಷಿ ಸಹಿಯನ್ನು ನಿಪಿ 1(ಎ) ಯಿಂದ 4(ಎ)ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೋಲೀಸ್ ಠಾಣೆಯಲ್ಲಿ ಪೋಲೀಸರ ಕೋರಿಕೆ ಮೇರೆಗೆ ಹಾಕಿರುತ್ತೇನೆ ಅದರಲ್ಲಿ ಬರೆದ ವಿಚಾರ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಹೇಳಿಕೆಯ ಅಂಶಗಳಿಗೆ ವಿರುದ್ದವಾಗಿ ನುಡಿದಿದ್ದರಿಂದ ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ.- ಅನುಮತಿ ನೀಡಲಾಯಿತು.)

**ಪಾಟೀಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

2. ದಿನಾಂಕ 18.07.2025 ರಂದು ಬೆಳಿಗ್ಗೆ 03.30 ರ ಸಮಯದಲ್ಲಿ ನಾನು ಲಾರಿ ಸಂಖೆ TN-34-W-9579 ರಲ್ಲಿ ತೆಂಗಿನಕಾಯಿ ಲೋಡ್ ಮಾಡಿಕೊಂಡು ತೆಮಿಳುನಾಡಿನ ನಾಮಕಲ್ ನಿಂದ ಗುಜರಾತ್ ನ ಅಹಮದಾಬಾದ್ ಗೆ ಲಾರಿಯನ್ನು ಚಾಲನೆ ಮಾಡಿಕೊಂಡು ಹೋಗುತ್ತಿದ್ದೆ ಎಂದರೆ ಸರಿಯಲ್ಲ. ಆರೋಪಿಯು KA-51-MN-4185 ಕಾರನ್ನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಮುಂದೆ ಹೋಗುತ್ತಿದ್ದ ನನ್ನ ಲಾರಿಗೆ

ಡಿಕ್ಕಿ ಪಡಿಸಿದರು ಎಂದರೆ ಸರಿಯಲ್ಲ. ಸದರಿ ಅಪಘಾತದಿಂದ ಕಾರಿನಲ್ಲಿದ್ದಂತಹ ಚಾಸಾ 3 ರಿಂದ 5 ರವರಿಗೆ ಗಾಯಗಳಾಗಿತ್ತು ಎಂದರೆ ಸರಿಯಲ್ಲ. ಕಾರಿನ ಚಾಲಕನ ಹೆಸರು ಹರ್ಷ ಎಂದು ತಿಳಿಯಿತು ಎಂದರೆ ಸರಿಯಲ್ಲ. ಈ ಬಗ್ಗೆ ಪೋಲೀಸರಿಗೆ ನಿಪಿ 1 ರಲ್ಲಿ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ದಿ 18.07.2025 ರಂದು ಪೋಲೀಸರು ಸ್ಥಳಕ್ಕೆ ಬಂದು ನನ್ನ ಸಮಕ್ಷಮ ಮಹಜರ್ ಜರುಗಿಸಿ ಅಪಘಾತಕ್ಕೆ ಒಳಪಟ್ಟ ವಾಹನವನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಆ ಸಮಯದಲ್ಲ್ ನಿಪಿ 2 ಮತ್ತು 3 ಕ್ಕೆ ಸಹಿ ಹಾಕಿರುತ್ತೇನೆ ಎಂದರೆ ಸರಿಯಲ್ಲ. ದಿ 19.07.2025 ರಂದು ಇಂಡೆಮ್ ನಿಟಿ ಬಾಂಡ್ ನೀಡಿ ನನ್ನ ವಾಹನವನ್ನು ವಶಕ್ಕೆ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿಗೆ ಸಹಾಯವಾಗಲೀ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ** ಇಲ್ಲ

**ಮರುವಿಚಾರಣೆಃ** ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಿದೆ.)

**ಓ ಹೇ ಕೇ ಸ ಇದೆ**

6 ನೇ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ತುಮಕೂರು.